# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 997 |
| ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದರು) |
| ಉತ್ತರಿಸಬೇಕಾದ ದಿನಾಂಕ | : | 27-12-2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಡಿಯಲ್ಲಿ ಎಷ್ಟು ಅಂಗನವಾಡಿ/ಮಿನಿ ಅಂಗನವಾಡಿ ಕೇಂದ್ರಗಳಿವೆ. ಇವುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕರುಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ 63030 ಅಂಗನವಾಡಿ ಕೇಂದ್ರಗಳು ಮತ್ತು 3331 ಮಿನಿ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.<br><br>ಸದರಿ ಕೇಂದ್ರಗಳಲ್ಲಿ 64729 ಕಾರ್ಯಕರ್ತೆಯರು ಮತ್ತು 59,627 ಅಂಗನವಾಡಿ ಸಹಾಯಕಿಯರುಗಳು ಕಾರ್ಯನಿರ್ವಹಿಸುತ್ತಿದ್ದಾರೆ. |
| ಆ. | ಈ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ/ ಸಹಾಯಕರಿಗೆ ಕಳೆದ ಮೂರು ತಿಂಗಳಿಂದ ಗೌರವಧನವನ್ನು ಪಾವತಿ ಮಾಡದೇ ಇರುವುದು ಸರ್ಕಾರದ ಗಮನದಲ್ಲಿದೆಯೇ; | ಅಂಗನವಾಡಿ ಕಾರ್ಯಕರ್ತೆಯರು/ ಸಹಾಯಕಿಯರು ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ. |
| (ಇ) | ಈ ಅಂಗನವಾಡಿ ಕಾರ್ಯಕರ್ತೆಯರಿಗೆ/ ಸಹಾಯಕರಿಗೆ ಪ್ರತಿಬಾರಿಯೂ ಗೌರವಧನದ ಸಮಸ್ಯೆಯಾದ ಸಮಯದಲ್ಲಿ ಇಲಾಖೆಯ ಅಧಿಕಾರಿಗಳು ತಾಂತ್ರಿಕ ಸಮಸ್ಯೆಯೊಡ್ಡಿ ವಿಳಂಬ ಮಾಡುತ್ತಿದ್ದು, ಈ ಸಮಸ್ಯೆಯನ್ನು ನಿವಾರಿಸಿ ಪ್ರತಿ ತಿಂಗಳ 5ನೇ ತಾರೀಖಿನ ಒಳಗೆ ಸದರಿಯವರುಗಳ ಗೌರವಧನವನ್ನು ಪಾವತಿಸಲು ಸರ್ಕಾರದ ಕ್ರಮವೇನು? | 2022-23ನೇ ಸಾಲಿನ ಆಯವ್ಯಯ ಸಂಪುಟಗಳಲ್ಲಿ ಪ್ರಸ್ತಾಪಿತ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಅನುದಾನವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗೆ ಅನುಗುಣವಾಗಿ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಪ್ರತ್ಯೇಕಿಸಿ 2022-23ನೇ ಸಾಲಿನ ಪೂರಕ ಅಂದಾಜು-1ನೇ ಕಂತಿನಲ್ಲಿ ನಿಗದಿಪಡಿಸಿದ್ದು, ಸದರಿ ಮೊತ್ತವನ್ನು ವಿನಿಯೋಗಿಸಲು ಅನುವಾಗುವಂತೆ ಆರ್ಥಿಕ ಇಲಾಖೆಯು ದಿನಾಂಕ: 19-10-2022ರ ಪತ್ರದಲ್ಲಿ ಅನುಮತಿ ನೀಡಲಾಗಿರುತ್ತದೆ.<br><br>ಅದರಂತೆ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಪ್ರತ್ಯೇಕಿಸಿ ತಾಲ್ಲೂಕುವಾರು ಹೊಸ ಲೆಕ್ಕ ಶೀರ್ಷಿಕೆಯಡಿ ಪ್ರಸ್ತಾಪಿತ ಕಾರ್ಯಕ್ರಮಗಳಡಿ ಮರುಹಂಚಿಕೆಗೊಳಿಸಿ ಖಜಾನೆ-2 ತಂತ್ರಾಂಶದಲ್ಲಿ ಅಳವಡಿಸಿ ಬಿಡುಗಡೆಗೊಳಿಸಲು ವಿಳಂಬವಾಗಿರುತ್ತದೆ. ಪ್ರಸ್ತುತ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಗೌರವಧನ ಸಂಬಂಧಿಸಿದಂತೆ ಡಿಸೆಂಬರ್-2022ರ ಅಂತ್ಯದವರೆಗೆ ಅನುದಾನ ವನ್ನು ಬಿಡುಗಡೆಗೊಳಿಸಲಾಗಿರುತ್ತದೆ.<br><br>ಸಮಸ್ಯೆಗಳನ್ನು ಬಗೆಹರಿಸಿದ್ದು, ವಿಳಂಬವಿಲ್ಲದೆ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ನಿಗಧಿತ ಸಮಯದಲ್ಲಿ ವೇತನ ಪಾವತಿಸಲು ಜಿಲ್ಲಾ / ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಗಿದೆ. |

**ಸಂಖ್ಯೆ:ಮಮಇ 366 ಐಸಿಡಿ 2022**

Halappa

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು